ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

ಅನ್ನಭಾಗ್ಯ ಯೋಜನೆಯನ್ನು ನ್ಯಾಯಬೆಲೆ ಅಂಗಡಿಯವರು ದುರುಪಯೋಗಪಡಿಸುತ್ತಿರುವ ಬಗ್ಗೆ

ಶ್ರೀ ಎಸ್. ಎಲ್. ಘೋಟ್ನೆಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

151 (71) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 1 ವರ್ಷದಲ್ಲಿ ಅನ್ನಭಾಗ್ಯ ಯೋಜನೆಯಡಿಯಲ್ಲಿ ಬಿ.ಪಿ.ಎಲ್., ಎ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್‌ದಾರರಿಗೆ ವಿತರಿಸಿದ ಅಕ್ಕಿಯ ಪ್ರಮಾಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಎಷ್ಟು ಎ.ಪಿ.ಎಲ್., ಬಿ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್‌ಗಳಿವೆ; ಎ.ಪಿ.ಎಲ್, ಬಿ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್ ಹೊಂದಿದವರಿಗೆ ವಿತರಿಸಲಾಗುವ ತಲಾ ಅಕ್ಕಿಯ ಪ್ರಮಾಣವೆಷ್ಟು ; ಜಿಲ್ಲೆಯಲ್ಲಿ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪ್ರತಿ ತಿಂಗಳು ವಿತರಿಸದಿರುವ ಅಕ್ಕಿಯನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗುತ್ತದೆ ; ಬಡವರಿಗೆ ಸರ್ಕಾರವು ನೀಡುವ ಅಕ್ಕಿಯನ್ನು ನ್ಯಾಯಬೆಲೆ ಅಂಗಡಿಯ ಮಾಲೀಕರು ವಿತರಿಸದೇ ಬಡವರಿಗೆ ವಿತರಿಸಿದೆಯೆಂದು ಸರ್ಕಾರಕ್ಕೆ ಸುಳ್ಳು ಲೆಕ್ಕ ತೋರಿಸುವ ಮೂಲಕ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿ ವಂಚಿಸುತ್ತಿರುವ ನ್ಯಾಯಬೆಲೆ ಅಂಗಡಿಯ ಮಾಲೀಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಕಳೆದ 1 ವರ್ಷದಲ್ಲಿ ಈ ರೀತಿ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಈ) ಬಡವರಿಗೆ ಕಡಿಮೆ ದರದಲ್ಲಿ ಅಥವಾ ಉಚಿತವಾಗಿ ಅಕ್ಕಿಯನ್ನು ವಿತರಿಸಲು ಸರ್ಕಾರವು ಕಳೆದ 1 ವರ್ಷದಲ್ಲಿ ಎಷ್ಟು ವೆಚ್ಚ ಮಾಡಿದೆ ; ತಿಂಗಳುವಾರು ವಿವರ ನೀಡುವುದು ? (ಜಿಲ್ಲಾವಾರು /ತಾಲ್ಲೂಕುವಾರು ವಿವರ ನೀಡುವುದು)